ಪ್ರಥಮ ದರ್ಜೆ ಮತ್ತು ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳು

309 : (308)

ಶ್ರೀ ನಾಗರಾಜು ಎಂ.ವಿ. (ನೆಲಮಂಗಲ)

ಅ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಬೆಂಗಳೂರು ವಿಭಾಗಕ್ಕೆ ಮಂಜೂರಾದ ಒಟ್ಟು ಪ್ರಥಮ ದರ್ಜೆ ಮತ್ತು ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳ ಸಂಖ್ಯೆ ಎಷ್ಟು;

ಆ) ಕಾರ್ಯನಿರ್ವಹಿಸುತ್ತಿರುವ ಪ್ರಥಮ ದರ್ಜೆ ಮತ್ತು ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು; (ಪೂರ್ಣ ವಿವರ ನೀಡುವುದು)

ಇ) ಕ್ಷೇತ್ರ ಸಮನ್ವಯಾಧಿಕಾರಿಗಳ ಕಛೇರಿಗಳಿಗೆ ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಯಾವಾಗ ಮಂಜೂರು ಮಾಡಲಾಗುವುದು?

ಈ) ಆರ್.ಎಂ.ಎಸ್.ಎ. ಪ್ರೌಢ ಶಾಲೆಗಳಿಗೆ ಪ್ರಥಮ ದರ್ಜೆ ಸಹಾಯಕರು ಅಥವಾ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಎಷ್ಟು ಹುದ್ದೆಗಳನ್ನು ಮಂಜೂರು ಮಾಡಲಾಗುವುದು ಹಾಗೂ ಯಾವಾಗ ಮಂಜೂರು ಮಾಡಲಾಗುವುದು? (ಪೂರ್ಣ ವಿವರ ನೀಡುವುದು)

ಶ್ರೀ ವಿಶ್ವೇಶ್ವರಯ್ಯ ಹೆಗಡೆ ಕಾಗೇರಿ
(ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಬೆಂಗಳೂರು ವಿಭಾಗದ ವ್ಯಾಪ್ತಿಯಲ್ಲಿ ಒಟ್ಟು 1601 ಪ್ರಥಮ ದರ್ಜೆ ಸಹಾಯಕರ ಮತ್ತು 2068 ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳು ಮಂಜೂರಾಗಿರುತ್ತವೆ.

ಕಾರ್ಯನಿರ್ವಹಿಸುತ್ತಿರುವವರು		ಖಾಲಿ ಹುದ್ದೆ	ಒಟ್ಟು
ಪ್ರ.ದ.ಸಹಾಯಕರು	1573	28	1601
ದ್ವಿ.ದ.ಸಹಾಯಕರು	2034	34	2068

ಇ) ಕ್ಷೇತ್ರ ಸಮನ್ವಯಾಧಿಕಾರಿಗಳ ಕಛೇರಿಗಳಿಗೆ ಪ್ರಥಮ ದರ್ಜೆ ಸಹಾಯಕರು ಅಥವಾ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಇರುವುದಿಲ್ಲ

ಈ) ಆರ್.ಎಂ.ಎಸ್.ಎ. ಅಡಿಯಲ್ಲಿ ಮಂಜೂರಾಗಿರುವ 305 ಪ್ರೌಢಶಾಲೆಗಳಿಗೆ 305 ಕಛೇರಿ ಸಹಾಯಕರು ಹಾಗೂ 305 ಪ್ರಯೋಗಾಲಯ ಸಹಾಯಕರ ಹುದ್ದೆಗಳು ಈಗಾಗಲೇ ಮಂಜೂರಾಗಿರುತ್ತವೆ.

Education Cess ಬೆಳಕೆ

321 : (407)

ಶ್ರೀ ರವಿಸುಬ್ರಹ್ಮಣ್ಯ ಎಲ್.ಎ. (ಬಸವನಗುಡಿ)

ಅ) ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಗ್ರಂಥಾಲಯ ಇಲಾಖೆಗೆ 2010–11 ಮತ್ತು 2011–12ನೇ ಸಾಲಿನಲ್ಲಿ ಸಂದಾಯವಾಗಿರುವ Educational Cess ನ ಮೊತ್ತ ಎಷ್ಟು (ವಲಯವಾರು ಮಾಹಿತಿ ನೀಡುವುದು)

ಆ) Education Cess ನ ಮೊತ್ತವನ್ನು ಯಾವ ಯಾವ ಉದ್ದೇಶಗಳಿಗೆ ಬಳಸಲಾಗುತ್ತಿದೆ (ಸಂಪೂರ್ಣ ವಿವರ ನೀಡುವುದು)?

ಶ್ರೀ ರೇವೂನಾಯಕ್ ಬೆಳಮಗಿ
(ಮಾನ್ಯ ಲೋಕ ಶಿಕ್ಷಣ ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನೆ ಸಚಿವರು.)

ಅ) ಬೆಂಗಳೂರು ಮಹಾನಗರಪಾಲಿಕೆಯಿಂದ ಯಾವುದೇ Educational Cess ಗ್ರಂಥಾಲಯ ಇಲಾಖೆಗೆ ಸಂದಾಯವಾಗಿರುವುದಿಲ್ಲ.

ಆ) ಅನ್ವಯಿಸುವುದಿಲ್ಲ.

ಭಾಗ್ಯಲಕ್ಷ್ಮಿ ಬಾಂಡ್ ವಿತರಣೆ

311 (382)

ಶ್ರೀ ನರೇಂದ್ರಬಾಬು ನೆ.ಲ.(ಮಹಾಲಕ್ಷ್ಮಿ ಲೇಔಟ್)

ಅ) ರಾಷ್ಟ್ರೀಯ ನಗರ ಆರೋಗ್ಯ ಮಿಷನ್ ಯೋಜನೆಯಡಿಯಲ್ಲಿ ರಾಜ್ಯ ಸರ್ಕಾರವು ರೂಪಿಸಿರುವ ಆಸ್ಪತ್ರೆಗಳ ನಿರ್ಮಾಣದ ವಿವರವೇನು; (ಮಾಹಿತಿ ನೀಡುವುದು)